1884ನೇ ಇಸವಿ ಅರ್ಜೀ ನಂಬರ್ 135.

ಅರ್ಜೀದಾರ ಮಂಡ್ಯ ತಾಲ್ಲೂಕು ಕಂಚನಹಳ್ಳಿಲಿರುವ 1 ಕುಳ್ಳೇಗೌಡ, 2 ಚಿಕ್ಕ ಬಸವೇಗೌಡ ಮೈನರಾದ ಮಂಡ್ಯ ತಾಲ್ಲೂಕು ಕಂಚನಹಳ್ಳಿ ಸ್ಥಳದ ಕಾಳೇಗೌಡನ ಮಗ ಬೊಮ್ಮನ ಆಸ್ತಿ ವಿಷಯದಲ್ಲಿ—

ಸದರೀ ಮೈನರಾದ ಬೊಮ್ಮನಿಗೆ ದಾಯಾದಿ ಆಗಬೇಕೆಂಬ ಹಕ್ಕಿನ ಮೇಲೆ ಸದರೀ ಸ್ಥಳದ ಕುಳ್ಳೇಗೌಡ, ಚಿಕ್ಕ ಬಸವೇಗೌಡ ಸಹ ಸದರೀ ಮೈನರಿನ ಆಸ್ತಿ ಕಾಪಾಡುವದಕ್ಕೆ ಸರಟಿಫಿಕೇಟ್ ಬಗ್ಗೆ ಮತ್ತು ಸದರೀ ಮೈನರಿಗೆ ಗಾರ್ಡಿಯರ್ ಆಗಿ ಮೊಕರರ್ ಮಾಡತಕ್ಕ ಬಗ್ಗೆ ಅರ್ಜಿ ಕೊಟ್ಟು ಇರುತ್ತಾರೆ.

ಸದರೀ ಅರ್ಜೀ ಹಿಯರಿಂಗ್ ಬಗ್ಗೆ ಮೈಸೂರು ಮೊಕ್ತಾಂ ಈ ಕೋರ್ಟಿನಲ್ಲಿ 1884ನೇ ಇಸವಿ ಜೂನ್ ತಾರೀಖು 24ರಲ್ಲು ಮೊಕರರ್ ಮಾಡಿರುವದಾಗಿ ಇದರಿಂದ ನೋಟೀಸ್ ಕೊಡೋಣಾಗಿಧೆ.

1884ನೇ ಇಸವಿ ಏಪ್ರೆಲ್ ತಿಂಗಳು ೩ನೇ ತಾರೀಖಿನಲ್ಲಿ ಕೋರ್ಟು ಮೊಹರ್ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ವಿ. ಎಸ್. ನರಸಿಹ್ಮಯ್ಯಂಗಾರ್,
ಡಿಸ್ಟ್ರಿಕ್ಟು ಜಡ್ಜ್.

ನಗರ ಡಿವೀರ್ಜ್.

ನಗರ ಡಿವೀರ್ಜ್ ಡಿಸ್ಟ್ರಿಕ್ಟು ಜಡ್ಜ್‌ಯವರ ಕೋರ್ಟಿನಲ್ಲಿ.

1884ನೇ ಇಸವಿ ಅರ್ಜೀ ನಂಬರ್ 45.

ಮೃತಪಟ್ಟ ದೇವಪ್ಪಗೌಡನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಪುಟ್ಟಪ್ಪ, ಮೃತಪಟ್ಟ ಸದರೀ ದೇವಪ್ಪಗೌಡನಿಗೆ ತಮ್ಮನು ಆಗಬೇಕೆಂಬ ಹಕ್ಕುದಾರೀ ಮೇಲೆ ನಾಗರ ತಾಲ್ಲೂಕು ಮಂಜಾಲೆ ಮಾಗಣಿ ಕಾನಗೋಡು ಸ್ಥಳದ ಪುಟ್ಟಪ್ಪನು, ಸದರೀ ಕಾನಗೋಡು ವಾಸಸ್ಥನಾಗಿ ಮೃತಪಟ್ಟ ದೇವಪ್ಪಗೌಡನ ಜಿಂದಗಿ ಬಗ್ಯಾಗಿ ಬರತಕ್ಕ 300 ರೂಪಾಯಿಗಳ ಸಾಲವನ್ನು ವಸೂಲ್‌ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಪುಟ್ಟಪ್ಪನ ಅರ್ಜೀಯನ್ನು 1884ನೇ ಇಸವಿ ಜೂನ್ ತಿಂಗಳು ತಾರೀಖು 26ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ದೇವಪ್ಪಗೌಡನ ಆಸ್ತೀಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1884ನೇ ಇಸವಿ ಅರ್ಜೀ ನಂಬರ್ 46.

ಮೃತಪಟ್ಟ ಹಲತಿನಗೊಂದಿ ಪರಂಣನ ಆಸ್ತಿ ವಿಷಯದಲ್ಲಿ—

ಅರ್ಜೀದಾರಳು ಸಿದ್ದಮ್ಮ, ಮೃತಪಟ್ಟ ಸದರೀ ಹಲತಿನಗೊಂದಿ ಪರಂಣನಿಗೆ ತಾಯಿಯು ಆಗಬೇಕೆಂಬ ಹಕ್ಕುದಾರೀ ಮೇಲೆ ತರೀಕೆರೆ ತಾಲ್ಲೂಕು ಬುಕ್ಕಾಂಬುಧಿ ಸ್ಥಳದ ಸಿದ್ದಮ್ಮ, ಸದರೀ ಬುಕ್ಕಾಂಬುಧಿ ವಾಸಸ್ಥನಾಗಿ ಮೃತಪಟ್ಟ ಹಲತಿನಗೊಂದಿ ಪರಂಣನ ಜಿಂದಗಿ ಬಗ್ಯಾಗಿ ಬರತಕ್ಕ 1,000 ರೂಪಾಯಿಗಳನ್ನು ವಸೂಲ್‌ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ಸಿದ್ದಮ್ಮನ ಅರ್ಜೀಯನ್ನು 1884ನೇ ಇಸವಿ ಜೂನ್ ತಿಂಗಳು ತಾರೀಖು 28ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಹಲತಿನಗೊಂದಿ ಪರಂಣನ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿಧೆ.

1884ನೇ ಇಸವಿ ಏಪ್ರೆಲ್ ತಿಂಗಳು 9ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಟಿ. ನರಹರಿರಾವ್,
ಡಿಸ್ಟ್ರಿಕ್ಟು ಜಡ್ಜ್.